ದಿನಾಂಕಃ26.09.2024 ರಂದು ಪಿ.ಡಬ್ಲೂ-1 ರವರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ಅವರು ತಮ್ಮ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಪಿ.ಡಬ್ಲೂ-1 ಅವರ ಮುಖ್ಯ ವಿಚಾರಣೆಯಾಗಿ ಪರಿಗಣಿಸಲು ಕೋರಿದ್ದು ಅವರ ಕೋರಿಕೆಯನ್ನು ಮನ್ನಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಎಂಎಲ್ ವಿ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತದೆ, ಅದಕ್ಕೆ ನಾನು ನನ್ನ ಸಹಿ ಮಾಡಿರುತ್ತೇನೆ.

1. ಕ್ರಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು ಗುರುತಿಸಲಾಯಿತು. ನಿಪಿ 1 ರಲ್ಲಿ ಸಾಕ್ಷಿ ತನ್ನ ಸಹಿಯನ್ನು ಗುರುತಿಸಿದ್ದು ಅದನ್ನು ನಿಪಿ1(ಎ), 2 ರಿಂದ 5 ನೇ ಪ್ರತಿವಾದಿಗಳ ಸಹಿಗಳನ್ನು ಗುರುತಿಸಿದ್ದು ಅವುಗಳನ್ನು ನಿಪಿ1(ಬಿ )ರಿಂದ ನಿಪಿ 1(ಇ) ಎಂದು ಗುರುತಿಸಲಾಯಿತು.

2.ನೋಟೀಸ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು.

3. ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 3 ರಿಂದ 8 ಎಂದು ಗುರುತಿಸಲಾಯಿತು.

4. ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 9 ರಿಂದ 13 ಎಂದು ಗುರುತಿಸಲಾಯಿತು.

5. ಇಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 14 ಎಂದು ಗುರುತಿಸಲಾಯಿತು.

6. ಆರ್.ಟಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 15 ಎಂದು ಗುರುತಿಸಲಾಯಿತು.

(ಪ್ರತಿವಾದಿಗಳು ಏಕಪಕ್ಷಿಯವಾಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

ಸಹಿ/-

(ಶ್ರೀಮತಿ ಸ್ನೇಹಾ ಎಂ.)

C/C ಪ್ರಧಾನ ಸಿಜೆ ಮತ್ತು ಜೆಎಂಎಫ್ ಸಿ

ಮುಳಬಾಗಿಲು